# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 619 |
| ಸದಸ್ಯರ ಹೆಸರು | : | ಶ್ರೀ ಆರ್.ಬಿ ತಿಮ್ಮಾಪೂರ |
| ಉತ್ತರಿಸಬೇಕಾದ ದಿನಾಂಕ | : | 11.03.2020 |
| ಉತ್ತರಿಸಬೇಕಾದ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ನ್ಯಾಯಮೂರ್ತಿ ಸದಾಶಿವ ಆಯೋಗವನ್ನು ರಚನೆ ಮಾಡಿದ್ದು ಯಾವಾಗ : ಆಯೋಗವು ವರದಿಯನ್ನು ನೀಡಲು ತೆಗೆದುಕೊಂಡ ಕಾಲಾವಕಾಶವೆಷ್ಟು; | ಸರ್ಕಾರದ ಆದೇಶ ಸಂಖ್ಯೆ: ಸಕಇ 227 ಎಸ್‌ಎಡಿ 2003 ದಿನಾಂಕ:24.09.2005 ರನ್ವಯ ನ್ಯಾಯಮೂರ್ತಿ ಸದಾಶಿವ ಆಯೋಗವನ್ನು ರಚನೆ ಮಾಡಲಾಗಿದ್ದು, ಸದರಿ ಆಯೋಗ ಈಗಾಗಲೇ ಸರ್ಕಾರಕ್ಕೆ ವರದಿ ನೀಡಿರುತ್ತದೆ. |
| ಆ | ಆಯೋಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು; (ದರ್ಜೆವಾರು ವಿವರ ನೀಡುವುದು) | ಆಯೋಗವು ಈಗಾಗಲೇ ವರದಿ ನೀಡಿದ್ದು, ಸದರಿ ಆಯೋಗವು ಈಗ ಅಸ್ತಿತ್ವದಲ್ಲಿರುವುದಿಲ್ಲ. |
| ಇ | ಆಯೋಗವು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು ಯಾವಾಗ; ಆಯೋಗವು ನೀಡಿರುವ ವರದಿಯನ್ನು ಜಾರಿಗೊಳಿಸಲು ಇರುವ ಅಡೆತಡೆಗಳೇನು; ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | ಆಯೋಗವು 2012ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಸದರಿ ವರದಿಯನ್ನು ಸರ್ಕಾರವು ಯಥವತ್ತಾಗಿ ಅಥವಾ ಭಾಗಶಃವಾಗಿ ಒಪ್ಪಿಕೊಳ್ಳಬಹುದೇ ಅಥವಾ ಕೆಲವೊಂದು ಮಾರ್ಪಾಡುಗಳೊಂದಿಗೆ ಒಪ್ಪಿಕೊಳ್ಳಬಹುದೇ ಎಂಬುದರ ಬಗ್ಗೆ ಪರಿಶೀಲಿಸಿ ವರದಿ ನೀಡಲು ಸಚಿವ ಸಂಪುಟ ಉಪ ಸಮಿತಿಯನ್ನು ಈ ಹಿಂದೆ ರಚಿಸಲಾಗಿದ್ದು, ತದನಂತರ ಹೊಸ ಸರ್ಕಾರಗಳು ಅಸ್ತಿತ್ವಕ್ಕೆ ಬಂದಿರುವುದರಿಂದ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲು ಕ್ರಮ ಜರುಗಿಸಲಾಗುತ್ತಿದೆ. ಉಪ ಸಮಿತಿಯ ಶಿಫಾರಸ್ಸಿನ ಮೇರೆಗೆ ಮುಂದಿನ ಸೂಕ್ತ ಕ್ರಮ ಜರುಗಿಸಲಾಗುವುದು. |

ಸಕಇ 51 ಎಸ್‌ಎಡಿ 2020

(ಗೋವಿಂದ ಎಂ. ಕಾರಜೋಳ).
ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು.